**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾ ದಂ. ರವರ ನ್ಯಾಯಾಲಯ,**
**ತಿಪಟೂರು**

**ಸಿ.ಸಿ. ನಂ.6164/2021** **ಪ್ರಾ.ಸಾ – 4**
**ಚಾ.ಸಾ – 4**

**ದಿನಾಂಕ: 18.08.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | : | ಲೋಕೇಶ್ |
| ತಂದೆಯ ಹೆಸರು | : | ಬೇಲೂರಯ್ಯ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಬಿದರೇಕಾವಲ್ |

**ಮುಖ್ಯ ವಿಚಾರಣೆ : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :-**

ನ್ಯಾಯಾಲಯದ ಮುಂದಿರುವ 1 ಮತ್ತು 2ನೇ ಆರೋಪಿತರ ಪರಿಚಯ ಇರುವುದಿಲ್ಲ. ಚಾಸಾ-1 ಮತ್ತು 2 ನನ್ನ ಊರಿನವರು. ಅವರ ಪರಿಚಯ ನನಗೆ ಇದೆ. ಅಪಘಾತವನ್ನು ನಾನು ನೋಡಿರುವುದಿಲ್ಲ. ಆದರೆ ಅಪಘಾತವಾದ ನಂತರ ನನಗೆ ಅಲ್ಲಿನ ಸ್ಥಳೀಯರು ದೂರವಾಣಿ ಮುಖಾಂತರ ಕರೆ ಮಾಡಿ ಅಪಘಾತವಾದ ಸ್ಥಳಕ್ಕೆ ಕರೆಸಿಕೊಂಡಿರುತ್ತಾರೆ. ಆನಂತರ ಅಂಬ್ಯುಲೆನ್ಸ್ ಕೆ ಕರೆ ಮಾಡಿ ಚಾಸಾ-1 ಮತ್ತು 2 ರವರನ್ನು ತಿಪಟೂರು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ. ದಿನಾಂಕ ನನಗೆ ನೆನಪಿಲ್ಲ. ಪೊಲೀಸರ ಮುಂದೆ ನನಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿತರನ್ನು ನೋಡಿ ಗುರುತಿಸಿರುವುದಿಲ್ಲ.

***(ಈ ಹಂತದಲ್ಲಿ ಸಾಕ್ಷಿಯು ತನ್ನ ಹೇಳಿಕೆಗೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿಯುತ್ತಿರುವುದರಿಂದ, ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ವಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು).***

**ವಾಟೀ ಸವಾಲು : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :-**

ದಿನಾಂಕಃ 26.08.2021 ರಂದು ನೀವು ಚಾಸಾ-11 ರವರ ಸಮಕ್ಷಮ ತಿಪಟೂರು ಪೊಲೀಸ್ ಠಾಣೆಯಲ್ಲಿ "ದಿನಾಂಕಃ 30.07.2021 ರಂದು ............................................

**CC. No.6164 OF 2021** **PW -4**

… ನೋಡಿದರೆ ಗುರುತಿಸುತ್ತೇನೆ" ಎಂದು ಹೇಳಿಕೆ ನೀಡಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿಯ ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ : ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚಿಸಿದೆ)**

**SD/-**

**ಪ್ರಧಾನ ಸಿವಿಲ್ ನ್ಯಾಯಾಧೀಶರು, ತಿಪಟೂರು.**